# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 379 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್.ಗೋಪಿನಾಥ್ |
| ಉತ್ತರಿಸುವ ದಿನಾಂಕ | : | 07-07-2023 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಇಲಾಖೆ ಸಚಿವರು. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ಜಿಲ್ಲೆಯ ಗ್ರಾಮೀಣ ಭಾಗದ ಮಕ್ಕಳ ವ್ಯಾಸಂಗಕ್ಕಾಗಿ ವಸತಿ ನಿಲಯಗಳನ್ನು ನಿರ್ಮಾಣ ಮಾಡಲು ಬಿಡುಗಡೆಯಾಗಿರುವ ಅನುದಾನವೆಷ್ಟು;</td><td rowspan="2">2022-23ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ನಡೆಸುತ್ತಿರುವ ಪರಿಶಿಷ್ಟ ಜಾತಿಯ 03 ವಿದ್ಯಾರ್ಥಿ ನಿಲಯಗಳಿಗೆ ಲೋಕೋಪಯೋಗಿ ಇಲಾಖೆಯ ಎಸ್.ಸಿ.ಎಸ್.ಪಿ ಅನುದಾನದಿಂದ ಸ್ವಂತ ಕಟ್ಟಡ ನಿರ್ಮಾಣ ಮಾಡಲು ದಿ:23-01-2023 ರಲ್ಲಿ ಅನುಮೋದನೆ ನೀಡಲಾಗಿರುತ್ತದೆ. ವಿವರಗಳು ಈ ಕೆಳಕಂಡಂತಿದೆ.<br>ರೂ.ಕೋಟಿಗಳಲ್ಲಿ
<table>
<tr><th>ತಾಲ್ಲೂಕು</th><th>ವಿದ್ಯಾರ್ಥಿನಿಲಯದವಿವರ</th><th>ಅಂದಾಜುಮೊತ್ತ</th><th>ಕಾಮಗಾರಿಯಪ್ರಸ್ತುತಹಂತ</th></tr>
<tr><td>ಬೆಂಗಳೂರು ದಕ್ಷಿಣ</td><td>ಸರ್ಕಾರಿವೃತ್ತಿಪರ ಬಾಲಕಿಯರ ವಿದ್ಯಾರ್ಥಿನಿಲಯ, ಹೆಚ್ .ಎಸ್.ಆರ್.ಲೇಔಟ್.</td><td>6.50</td><td>ಕಾರ್ಯಾದೇಶ ನೀಡಬೇಕಾಗಿರುತ್ತದೆ.</td></tr>
<tr><td>ಬೆಂಗಳೂರು ಪೂರ್ವ</td><td>ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಕೆ.ಆರ್.ಪುರಂ (ಹೋಪ್‌ಫಾರಂ).</td><td>6.50</td><td>ಕಾರ್ಯಾದೇಶ ನೀಡಬೇಕಾಗಿರುತ್ತದೆ.</td></tr>
<tr><td>ನೆಲಮಂಗಲ</td><td>ಸರ್ಕಾರಿಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ನೆಲಮಂಗಲ ಟೌನ್</td><td>6.30</td><td>ಕಾರ್ಯಾದೇಶ ನೀಡಬೇಕಾಗಿರುತ್ತದೆ.</td></tr>
<tr><td colspan="2">ಒಟ್ಟು</td><td>19.30</td><td></td></tr>
</table>
</td></tr>
<tr><td>ಆ</td><td>ಈ ರೀತಿ ಬಿಡುಗಡೆಯಾಗಿರುವ ಅನುದಾನದಲ್ಲಿ ಕಾಮಗಾರಿಗಳ ಪ್ರಗತಿಯು ಯಾವ ಹಂತದಲ್ಲಿದೆ;</td></tr>
</table>

| | | |
|---|---|---|
| ಇ | ವಸತಿ ನಿಲಯಗಳ ಗುಣಮಟ್ಟ ಸುಧಾರಿಸಲು ಸರ್ಕಾರಿ ಕೈಗೊಂಡ ಕ್ರಮಗಳೇನು? | ನಿವೇಶನ ಲಭ್ಯವಿರುವ ವಿದ್ಯಾರ್ಥಿನಿಲಯಗಳಿಗೆ ಅನುದಾನ ಲಭ್ಯತೆಯನ್ನು ಆಧರಿಸಿ, ಅಗತ್ಯ ಮೂಲಭೂತ ಸೌಕರ್ಯಗಳನ್ನೊಳಗೊಂಡ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ. ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಗೆ ಅನುಗುಣವಾಗಿ, ಲಭ್ಯವಿರುವ ಸ್ಥಳಾವಕಾಶದ ಆಧಾರದಲ್ಲಿ ಹೆಚ್ಚುವರಿ ವಾಸದ ಕೊಠಡಿ/ ಶೌಚಾಲಯ/ ಸ್ನಾನ ಗೃಹಗಳ ನಿರ್ಮಾಣ ಮಾಡಲಾಗುತ್ತಿದೆ ಹಾಗೂ ಕಾಲ-ಕಾಲಕ್ಕೆ ಅಗತ್ಯ ದುರಸ್ತಿ/ ಉನ್ನತೀಕರಣ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. |

ಸಕಇ 209 **ಎಸ್‌ಎಲ್‌ಪಿ 2023**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಇಲಾಖೆ ಸಚಿವರು**